# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 876

ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 21.09.2022.

ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಾಲೀಕತ್ವದ ಕೃಷಿ ಭೂಮಿ ಭೂಪರಿವರ್ತನೆ ಮಾಡುವುದನ್ನು ಸರ್ಕಾರ ನಿಷೇಧಿಸಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 156 ಎಲ್‌ಜಿಪಿ, 2020, ದಿನಾಂಕ:21.09.2020 ರಂತೆ ಅರ್ಜಿದಾರರು ಭೂ ಪರಿವರ್ತನೆಗೆ https;//landrecords. karnataka.gov.in/ citizenportal ನಲ್ಲಿ ಲಾಗಿನ್ ಆಗುವ ಮೂಲಕ Affidavit based conversion module ನಲ್ಲಿ ಚಾಲ್ತಿ ವರ್ಷದ ಪಹಣಿ ಮ್ಯುಟೇಷನ್, ಭೂ ಪರಿವರ್ತನಾ ಪೂರ್ವ ನಕ್ಷೆ (ಭಾಗಶಃ ವಿಸ್ತೀರ್ಣವಾಗಿದ್ದಲ್ಲಿ) ಮತ್ತು ರೂ.200/- ಛಾಪಾ ಕಾಗದದಲ್ಲಿ ನೋಟರಿಯವರಿಂದ ಪ್ರಮಾಣಿಕರಿಸಿದ ಅಫಿಡವಿಟ್‌ನೊಂದಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಭೂ ಪರಿವರ್ತನೆಗಾಗಿ ಆನ್‌ಲೈನ್ ಮೂಲಕ ಅರ್ಜಿ ಸ್ವೀಕರಿಸಿದ ದಿನಾಂಕದಿಂದ ಮುಂದಿನ 30ದಿನಗಳೊಳಗಾಗಿ ಭೂ ಪರಿವರ್ತನಾ ಆದೇಶ/ಹಿಂಬರಹವನ್ನು ಜಿಲ್ಲಾಧಿಕಾರಿಗಳು, ಹೊರಡಿಸಬಹುದಾಗಿದೆ.<br><br>ಪರಿಶಿಷ್ಟ ಜಾತಿ/ಪಂಗಡದವರಿಗೆ ಮಂಜೂರಾದ ಕರ್ನಾಟಕ ಪರಿಶಿಷ್ಟ ಜಾತಿ/ಪಂಗಡಗಳ (ಕೆಲವು ಭೂಮಿಗಳ ಪರಭಾರೆ ನಿಷೇಧ) ಅಧಿನಿಯಮ 1978ರ ವ್ಯಾಪ್ತಿಗೆ ಒಳಪಡುವ ಜಮೀನುಗಳನ್ನು ಭೂ ಪರಿವರ್ತನೆ ಮಾಡುವ ಮೊದಲು ಸರ್ಕಾರದಿಂದ ಕಡ್ಡಾಯವಾಗಿ ಪೂರ್ವಾನುಮತಿ ಪಡೆದ ನಂತರ ಭೂ ಪರಿವರ್ತನೆ ಮಾಡಲು ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 144 ಎಲ್‌ಜಿಎಕ್ಸ್ 2021, ದಿನಾಂಕ:29.09.2021ರ ಸುತ್ತೋಲೆಯಲ್ಲಿ ತಿಳಿಸಲಾಗಿದೆ. |
| ಆ) | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಾಲೀಕತ್ವದ ಕೃಷಿ ಭೂಮಿ ಭೂ ಪರಿವರ್ತನೆ ಮಾಡುವುದನ್ನು ಸರ್ಕಾರ ನಿಷೇಧಿಸಿ ರುವುದರಿಂದ ಸದರಿ ಜನರಿಗೆ ಮನೆ/ಕಟ್ಟಡ/ ಕೈಗಾರಿಕೆ/ ಕಟ್ಟಡ ಕಟ್ಟಲು ಸಾಲ ಪಡೆಯುವ ನಮೂನೆ 9 11 ಪಡೆಯಲು ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಸರ್ಕಾರವು ಮಂಜೂರು ಮಾಡುವ ಜಮೀನಿನ ಮೂಲ ಉದ್ದೇಶವು ಕೃಷಿ ಚಟುವಟಿಕೆ ಯಾಗಿರುತ್ತದೆ. ಅಂತಹ ಜಮೀನುಗಳು ಕೃಷಿಯೇತರ ಚಟುವಟಿಕೆಗಳಿಗೆ ಭೂ ಪರಿವರ್ತನೆಯಾದಲ್ಲಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಕೆಲವೊಂದು ಜಮೀನುಗಳ ಪರಭಾರೆ ನಿಷೇಧ) ಕಾಯ್ದೆ, 1978ರ ವ್ಯಾಪ್ತಿಗೆ ಹೊರತಾಗುತ್ತದೆ. ಆದಕಾರಣ, ಅತ್ಯಂತ ಸುಲಭವಾಗಿ ಅಂತಹ ಜಮೀನುಗಳು ಪರಭಾರೆಯಾಗುವ ಅವಕಾಶವಿದೆ. ಆದ್ದರಿಂದ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ (ಕೆಲವೊಂದು ಜಮೀನುಗಳ ಪರಭಾರೆ ನಿಷೇಧ) ಕಾಯ್ದೆ, 1978ರ ಧ್ಯೇಯೋದ್ದೇಶಗಳನ್ನು ಗಂಭೀರವಾಗಿ ಪಾಲಿಸುವ ದೃಷ್ಟಿಯಿಂದ ಭೂ ಪರಿವರ್ತನೆಗೆ ಸರ್ಕಾರದ ಪೂರ್ವಾನುಮೋದನೆಯ ಅಗತ್ಯವಿರುತ್ತದೆ. |
| ಇ) | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಾಲೀಕತ್ವದ ಕೃಷಿ ಭೂಮಿ ಭೂ ಪರಿವರ್ತನೆ ನಿಷೇಧ ಆದೇಶವನ್ನು ಹಿಂಪಡೆಯುವ/ಮಾರ್ಪಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು.) | ಪಿಟಿಸಿಎಲ್ ಕಾಯ್ದೆಯ ವ್ಯಾಪ್ತಿಗೆ ಒಳಪಡುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮಂಜೂರಾದ ಜಮೀನಿನಲ್ಲಿ 10 ಸೆಂಟ್ಸ್/4 ಗುಂಟೆ ಜಮೀನನ್ನು ವಾಸ್ತವ್ಯ ಉದ್ದೇಶಕ್ಕೆ ಜಿಲ್ಲಾಧಿಕಾರಿಗಳ ಹಂತದಲ್ಲಿ ಭೂ ಪರಿವರ್ತನೆಗೆ ಅವಕಾಶ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ. |

ಸಂಖ್ಯೆ: ಆರ್‌ಡಿ 217 ಎಲ್‌ಜಿಕ್ಯೂ 2022

(ಆರ್.ಅಶೋಕ)
ಕಂದಾಯ ಸಚಿವರು